**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 2022-23ನೇ ಸಾಲಿಗೆ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾಯದೆ 2013ರ ಪ್ರಮುಖ ಅಂಶಗಳ ಕುರಿತು ಸಾರ್ವಜನಿಕರು/ಕಾರ್ಮಿಕರಲ್ಲಿ ಅರಿವು ಮೂಡಿಸಲು 60 ನಿಮಿಷಗಳ ಸಾಕ್ಷ್ಯಚಿತ್ರವನ್ನು ತಯಾರಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಸಕಇ 365 ಎಸ್‌ಡಿಸಿ 2022, ದಿನಾಂಕ:30.06.2022 ಮತ್ತು 21.07.2022.
2. ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ:ಆಇ 678 ವೆಚ್ಚ-12/2021, ದಿನಾಂಕ:08.02.2022.
3. ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಇವರ ಏಕ ಕಡತ ಸಂಖ್ಯೆ: KSCSK/ADMN/SO/5/2022-SECY, ದಿನಾಂಕ:21.09.2022.

****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ಸರ್ಕಾರದ ಆದೇಶದಲ್ಲಿ, 2022-23ನೇ ಸಾಲಿಗೆ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ವಾರ್ಷಿಕ ಕ್ರಿಯಾಯೋಜನೆಗೆ ಷರತ್ತಿಗಳಿಗೊಳಪಟ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2) ರ ಸರ್ಕಾರದ ಅಧಿಸೂಚನೆಯಲ್ಲಿ, ಛಾಯಾಚಿತ್ರ ತಯಾರಿಕೆ, ವಿಡಿಯೋ ಚಿತ್ರೀಕರಣ, ಡಾಕ್ಯುಮೆಂಟ್ರಿ ಚಿತ್ರೀಕರಣ ಸೇವೆಗಳನ್ನು ಷರತ್ತುಗಳಿಗೊಳಪಟ್ಟು ಗರಿಷ್ಟ ರೂ. 25.00 ಲಕ್ಷಗಳ ಮಿತಿಯಲ್ಲಿ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಒಂದು ವರ್ಷದ ಅವಧಿಗೆ ನೇರವಾಗಿ ಪಡೆಯಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ -1999ರ ಕಲ-4(ಜಿ) ರಡಿ ವಿನಾಯಿತಿ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಏಕಕಡತದಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿ ನಿರ್ಮೂಲನೆ ಮಾಡಲು ಎಂ.ಎಸ್.ಕಾಯ್ದೆ 2013ರ ಪ್ರಮುಖ ಅಂಶಗಳನ್ನು ಮತ್ತು ಸರ್ಕಾರದ ಸೌಲಭ್ಯಗಳನ್ನು ಸಾರ್ವಜನಿಕರು ಮತ್ತು ಕಾರ್ಮಿಕರಲ್ಲಿ ಅರಿವು ಮೂಡಿಸುವ ಸಲುವಾಗಿ 60 ನಿಮಿಷಗಳ ಅವಧಿಗೆ ಸಾಕ್ಷ್ಯಚಿತ್ರವನ್ನು ತಯಾರಿಸಿ 31 ಜಿಲ್ಲೆಗಳಲ್ಲಿ ಕೇಬಲ್, ಟಿ.ವಿ ಚಾನೆಲ್ ಮೂಲಕ ಪ್ರಸರಿಸಲು ರೂ.23,84,212/-ಗಳ ವೆಚ್ಚದಲ್ಲಿ (ಎಲ್ಲಾ ತೆರಿಗೆ ಸೇರಿದಂತೆ) ಮಾರ್ಕೆಟಿಂಗ್ ಕಮ್ಯುನಿಕೇಷನ್ & ಅಡ್ವರ್ಟೈಸಿಂಗ್.ಲಿ, ಬೆಂಗಳೂರು, ರವರ ಮೂಲಕ ಸಾಕ್ಷ್ಯಚಿತ್ರ ತಯಾರಿಸಲು ಮತ್ತು ಇದಕ್ಕೆ ತಗಲುವ ವೆಚ್ಚವನ್ನು 2022-23ನೇ ಸಾಲಿನಲ್ಲಿ ಆಯೋಗದ ಲೆಕ್ಕ ಶೀರ್ಷಿಕೆ 2225-01-277-0-69 ರಡಿ ಅರಿವು ಮೂಡಿಸುವ ಕಾರ್ಯಕ್ರಮದಡಿ ಇತರೆ ವೆಚ್ಚಗಳ (059) ಅನುದಾನದಡಿ ನಿಗಧಿಪಡಿಸಲಾಗಿರುವ ಅನುದಾನದಲ್ಲಿ ರೂ.28.00 ಲಕ್ಷಗಳನ್ನು ಭರಿಸಲು ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ-ಎಸ್ ಡಿ ಸಿ 545 2022, ಬೆಂಗಳೂರು, ದಿನಾಂಕ: 18.10.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿ ನಿರ್ಮೂಲನೆ ಮಾಡಲು ಎಂ. ಎಸ್. ಕಾಯ್ದೆ 2013ರ ಪ್ರಮುಖ ಅಂಶಗಳನ್ನು ಮತ್ತು ಸರ್ಕಾರದ

--2

Scanned by CamScanner

ಸೌಲಭ್ಯಗಳನ್ನು ಸಾರ್ವಜನಿಕರು ಮತ್ತು ಕಾರ್ಮಿಕರಲ್ಲಿ ಅರಿವು ಮೂಡಿಸುವ ಸಲುವಾಗಿ 60 ನಿಮಿಷಗಳ ಅವಧಿಗೆ ಮಾರ್ಕೆಟಿಂಗ್ ಕಮ್ಯುನಿಕೇಷನ್ & ಅಡ್ವರ್ಟೈಸಿಂಗ್.ಲಿ, ಬೆಂಗಳೂರು, ರವರ ಮೂಲಕ ಸಾಕ್ಷ್ಯಚಿತ್ರ ತಯಾರಿಸಲು ಹಾಗೂ ಸದರಿ ಸಾಕ್ಷ್ಯಚಿತ್ರವನ್ನು ರಾಜ್ಯದ ಎಲ್ಲಾ ಜಿಲ್ಲೆಗಳ ಕೇಬಲ್, ಟಿ.ವಿ ಚಾನೆಲ್, ಸುದ್ದಿವಾಹಿನಿ ಮೂಲಕ ಪ್ರಸರಿಸಲು ರೂ.23,84,212/-ಗಳ (ಎಲ್ಲಾ ತೆರಿಗೆ ಸೇರಿದಂತೆ) ಅನುದಾನಕ್ಕೆ ಮಂಜೂರಾತಿ ನೀಡಿ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

ಷರತ್ತುಗಳು:-

1. ಕೆ. ಟಿ. ಪಿ. ಪಿ. ನಿಯಮಗಳನ್ನು ಪಾಲಿಸತಕ್ಕದ್ದು.
2. ಸದರಿ ಕಾರ್ಯಕ್ರಮಕ್ಕೆ ತಗಲುವ ವೆಚ್ಚವನ್ನು 2022-23ನೇ ಸಾಲಿನಲ್ಲಿ ಆಯೋಗದ ಲೆಕ್ಕ ಶೀರ್ಷಿಕೆ 2225-01-277-0-69 ರಡಿ ಅರಿವು ಮೂಡಿಸುವ ಕಾರ್ಯಕ್ರಮದಡಿ ಇತರೆ ವೆಚ್ಚಗಳ (059) ಅನುದಾನದಡಿ ಭರಿಸತಕ್ಕದ್ದು.
3. ಎಂ.ಎಸ್. ಕಾಯ್ದೆ 2013 ರಂತೆ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ನಿರ್ಮೂಲನೆ ಬಗ್ಗೆ, ಕಾಯ್ದೆ ಅಡಿ ಇರುವ ಮುಖ್ಯಾಂಶಗಳನ್ನು ಸ್ಥಳಿಯ ಸಂಸ್ಥೆಗಳ ಜವಾಬ್ದಾರಿಗಳನ್ನು ಕಾಯ್ದೆಯನ್ನು ಉಲ್ಲಂಘನೆ ಮಾಡಿದ್ದಲ್ಲಿ ಯಾವ ರೀತಿ ಶಿಕ್ಷೆ ಆಗುತ್ತದೆ ಮತ್ತು ಈಗಾಗಲೇ ಮೃತಪಟ್ಟವರ/ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ಪುನರ್ವಸತಿ ಬಗ್ಗೆ ಹಾಗೂ ವಿವಿಧ ಅಧಿಕಾರಿಗಳ ಜವಾಬ್ದಾರಿಗಳು ಇತ್ಯಾದಿಗಳನ್ನು ಸಾಕ್ಷ್ಯ ಚಿತ್ರದಲ್ಲಿ ಅಳವಡಿಸಿಕೊಳ್ಳುವುದು.
4. ಸಾಕ್ಷ್ಯ ಚಿತ್ರದಲ್ಲಿ ಈಗಾಗಲೇ ಬಿಡಬ್ಲ್ಯೂ ಎಸ್‌ಎಸ್ ಬಿ ಮತ್ತು ಇತರ ಸ್ಥಳೀಯ ಸಂಸ್ಥೆಗಳಲ್ಲಿ ಜೆಟ್ಟಿಂಗ್ ಮತ್ತು ಸೆಟ್ಟಿಂಗ್ ಮೆಷಿನ್ ಗಳನ್ನು ಉಪಯೋಗಿಸುತ್ತಿರುವುದರಿಂದ, ಮ್ಯಾನ್ಯುಯಲ್ ಸ್ಕಾವೆಂಜಿಂಗ್ ಅನ್ನು ನಿಷೇಧಿಸಬಹುದು ಎಂಬ ಅಂಶವನ್ನು ಸೇರಿಸುವುದು.
5. ಸಾಕ್ಷ್ಯ ಚಿತ್ರದಲ್ಲಿ ಈಗಾಗಲೇ ಬಿಡಬ್ಲ್ಯೂ ಎಸ್‌ಎಸ್ ಬಿ ಮತ್ತು ಇತರ ಸ್ಥಳೀಯ ಸಂಸ್ಥೆಗಳಲ್ಲಿ ಜೆಟ್ಟಿಂಗ್ ಮತ್ತು ಸೆಟ್ಟಿಂಗ್ ಮೆಷಿನ್ ಗಳನ್ನು ಉಪಯೋಗಿಸುತ್ತಿರುವುದರಿಂದ, ಮ್ಯಾನ್ಯುಯಲ್ ಸ್ಕಾವೆಂಜಿಂಗ್ ಅನ್ನು ನಿಷೇಧಿಸಬಹುದು ಎಂಬ ಅಂಶವನ್ನು ಸೇರ್ಪಡೆಗೊಂಡಂತೆ ಸಾಕ್ಷ್ಯಚಿತ್ರವನ್ನು ತಯಾರಿಸುವುದು.
6. ಸದರಿ ಕಾರ್ಯಕ್ರಮವನ್ನು ನಿಗಧಿಪಡಿಸಿ ಆದೇಶಿಸಿರುವ ಅನುದಾನದ ಮಿತಿಯೊಳಗೆ ಅನುಷ್ಠಾನಗೊಳಿಸತಕ್ಕದ್ದು.
7. ನಿಗಧಿತ ಅವಧಿಯೊಳಗಾಗಿ ಸಾಕ್ಷ್ಯಚಿತ್ರವನ್ನು ತಯಾರಿಸಿ ಪ್ರಸಾರ ಮಾಡುವುದು.
8. ಸದರಿ ಅನುದಾನವನ್ನು ವೆಚ್ಚ ಮಾಡಿದ ನಂತರ ಉಪಯೋಗಿತ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.
9. ಮಾರ್ಕೆಟಿಂಗ್ ಕಮ್ಯುನಿಕೇಷನ್ & ಅಡ್ವರ್ಟೈಸಿಂಗ್.ಲಿ, ಬೆಂಗಳೂರು, ಇವರೊಂದಿಗೆ ಕಾರ್ಯದರ್ಶಿಗಳು, ಸಫಾಯಿ ಕರ್ಮಚಾರಿ ಆಯೋಗ ಇವರು ಪ್ರಸ್ತಾವನೆಯಲ್ಲಿ ಸಲ್ಲಿಸಿರುವ ಹಾಗೂ ಸದರಿ ಆದೇಶದ ಸಂಬಂಧಪಟ್ಟ ಷರತ್ತುಗಳೊಂದಿಗೆ ಕರಾರನ್ನು ಮಾಡಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ವಿ. ಪ್ರಕಾಶ್)**
ಸರ್ಕಾರದ ಉಪ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು, (ಎ & ಇ ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.

--3

Scanned by CamScanner

2. ಖಜನಾಧಿಕಾರಿ, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
4. ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ, ಬೆಂಗಳೂರು.
6. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ.
7. ಸಂಬಂಧಪಟ್ಟ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
8. ಸಂಬಂಧಪಟ್ಟ ಜಂಟಿ/ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
9. ಕಲ್ಯಾಣ ಮಿತ್ರ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿಗಳು:-

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ.
3. ಸರ್ಕಾರದ ಉಪ ಕಾರ್ಯದರ್ಶಿ-3 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.

*****

Scanned by CamScanner